**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/80/ಖಾಹುಮಾ/2014-15/ನೇ.ವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 12.09.2017.

## ಸುತ್ತೋಲೆ

ವಿಷಯ: ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ/240/ಯುಪಿಸಿ/2014 ದಿನಾಂಕ:01.09.2017.

*****

ಇಲಾಖಾ ವ್ಯಾಪ್ತಿಗೊಳಪಡುವ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31.12.2015ರ ವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ನಿಗದಿತ ವಿದ್ಯಾರ್ಥಿಗಳ ಸಂಖ್ಯೆ, ಮೀಸಲಾತಿ ಮತ್ತು ಅಗತ್ಯ ಕಾರ್ಯಭಾರದ ಆಧಾರದ ಮೇಲೆ ಕೆಲವೊಂದು ಷರತ್ತುಗಳನ್ನು ಪೂರೈಸಿರುವ ಬಗ್ಗೆ ಖಚಿತಪಡಿಸಿಕೊಂಡ ನಂತರ, ನಿಯಮಾನುಸಾರ ಭರ್ತಿ ಮಾಡಲು ಸರ್ಕಾರ ಸಹಮತಿಸಿದೆ ಎಂದು ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ನಿರ್ದೇಶಿಸಲಾಗಿದೆ.

ಆದ್ದರಿಂದ, ಉಲ್ಲೇಖಿತ ಸರ್ಕಾರದ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಲಾಗಿದ್ದು, ತಮ್ಮ ಆಡಳಿತ ಮಂಡಳಿ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31.12.2015 ರೊಳಗಾಗಿ ವಿವಿಧ ಕಾರಣಗಳಿಂದ ತೆರವಾಗಿರುವ ಅನುದಾನಿತ ಬೋಧಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ತಿಳಿಸಿರುವ ಷರತ್ತುಗಳನ್ನು ಪೂರೈಸಿರುವ ಬಗ್ಗೆ, 2017-18ನೇ ಶೈಕ್ಷಣಿಕ ಸಾಲಿನಲ್ಲಿ ಖಾಲಿ ಹುದ್ದೆಗಳಿಗಿರುವ ಕಾರ್ಯಭಾರ, ಮೀಸಲಾತಿ ಹಾಗೂ ಇನ್ನಿತರೆ ಅಗತ್ಯ ಮಾಹಿತಿ & ದೃಢೀಕೃತ ದಾಖಲಾತಿಗಳೊಂದಿಗೆ ಅಗತ್ಯ ಪ್ರಸ್ತಾವನೆಯನ್ನು ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

(1) ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿಗೆ – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
(2) ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

(1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ & ಕಲಬುರಗಿ – ಮಾಹಿತಿಗಾಗಿ ಹಾಗೂ ಆಡಳಿತ ಮಂಡಳಿ/ಪ್ರಾಂಶುಪಾಲರುಗಳು ಸಲ್ಲಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಖಾಲಿ ಹುದ್ದೆಗಳಿಗೆ ಮೀಸಲಾತಿ ನಿಗದಿಪಡಿಸಿ, ಖಾಲಿ ಹುದ್ದೆ ಭರ್ತಿ ಮಾಡಲು ಅನುಮತಿ ಕೋರಿ, ಕೂಡಲೇ ಈ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸುವುದು.

(2) ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು – ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.

(3) ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 240 ಯುಪಿಸಿ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹು ಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-09-2017

**ಇಂದ:**

**ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,**
**ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),**
**ಬೆಂಗಳೂರು.**

**ಗೆ:**

ಕಾಲೇಜು ಶಿಕ್ಷಣ ಆಯುಕ್ತರು,
ಬೆಂಗಳೂರು.

ಮಾನ್ಯರೆ,

**ವಿಷಯ:** ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:** ತಮ್ಮ ಪತ್ರ ಸಂಖ್ಯೆ:ಕಾಶಿಇ/80/ಖಾಹುಮಾ/2014-15/ನೇ.ವಿ-2, ದಿನಾಂಕ:12-12-2014, 25-2-2016, 20-6-2016, 29-07-2016, 10-11-2016, 08-3-2017, ಹಾಗೂ 22-3-2017.

(*****)

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ತಮ್ಮ ಪತ್ರ ಹಾಗೂ ಪ್ರಸ್ತಾವನೆಗಳನ್ನು ಪರಿಶೀಲಿಸಲಾಯಿತು. ಸದರಿ ಪ್ರಸ್ತಾವನೆಗಳಲ್ಲಿ ತಿಳಿಸಿರುವ ಕಾಲೇಜುಗಳು ಸೇರಿದಂತೆ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31/12/2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ, ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ನಿಗಧಿತ ವಿದ್ಯಾರ್ಥಿಗಳ ಸಂಖ್ಯೆ ಮೀಸಲಾತಿ ಮತ್ತು ಅಗತ್ಯ ಕಾರ್ಯಭಾರದ ಆಧಾರದ ಮೇಲೆ ಈ ಕೆಳಕಂಡ ಷರತ್ತುಗಳನ್ನು ಪೂರೈಸಿರುವ ಬಗ್ಗೆ ಖಚಿತ ಪಡಿಸಿಕೊಂಡ ನಂತರವೇ ನಿಯಮಾನುಸಾರವಾಗಿ ಭರ್ತಿ ಮಾಡಲು ಸರ್ಕಾರ ಸಹಮತಿಸಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದೆ:

1. ಪ್ರಸ್ತಾಪಿತ ಕಾಲೇಜನ್ನು ಈಗಾಗಲೇ ನಿಯಮಗಳನ್ನು ಪಾಲಿಸಿ ವೇತನಾನುದಾನಕ್ಕೆ ಒಳಪಡಿಸಿರುವುದನ್ನು ದೃಢೀಕರಿಸಿಕೊಳ್ಳತಕ್ಕದ್ದು.
2. ಪ್ರಸ್ತಾಪಿತ ಹುದ್ದೆ ಅನುದಾನ ಸಂಹಿತೆ ಹಾಗೂ ನಿಯಮಗಳ ಪ್ರಕಾರ ನಿಗದಿಪಡಿಸಿದ ಸಿಬ್ಬಂದಿ ಮಾದರಿ ಮಿತಿಯೊಳಗೆ ಇರಬೇಕು. ಇದನ್ನು ಈಗಾಗಲೇ ಮಂಜೂರು ಮಾಡಿದ ಹುದ್ದೆಗಳನ್ನು ಕಾಣಿಸಿ, ಈಗ ಮಂಜೂರು ಮಾಡಿದ ಹುದ್ದೆ ಸಹಿತ ಮಿತಿಯೊಳಗೆ ಇರುವುದನ್ನು ದೃಢೀಕರಿಸಿಕೊಳ್ಳತಕ್ಕದ್ದು.
3. ಮೀಸಲಾತಿ ಮತ್ತು ರೋಸ್ಟರ್ ಪಾಲಿಸಿರುವ ಬಗ್ಗೆ ಇರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗಿಯೇ ಎಂಬುದನ್ನು ದೃಢಪಡಿಸಿಕೊಳ್ಳುವುದು.
4. ಹುದ್ದೆಗಳಿಗೆ ಯು.ಜಿ.ಸಿ ನಿಗದಿಪಡಿಸಿದ ವಿದ್ಯಾರ್ಹತೆ, ಆಯ್ಕೆ ವಿಧಾನದಂತೆ ನೇಮಕಾತಿ ನಿಯಮಗಳನ್ನು ಪಾಲಿಸಿ, ಪಾರದರ್ಶಕವಾಗಿ ನೇಮಕಾತಿ ಮಾಡಿಕೊಳ್ಳತಕ್ಕದ್ದು.
5. ಹುದ್ದೆಗಳ ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 146 ಯುಪಿಸಿ 1979, ದಿನಾಂಕ:03-10-1981ರ ಅಂಶಗಳನ್ನು ದಾಖಲೆಗಳ ಸಹಿತ ಪರಿಶೀಲಿಸಿ ನಿಯಮಾನುಸಾರ ಕ್ರಮವಹಿಸತಕ್ಕದ್ದು.
6. ಇಲಾಖೆಗೆ ನಿಗದಿಪಡಿಸಿದ ಆಯವ್ಯಯದಿಂದಲೇ ಈ ಬಗ್ಗೆ ಬೇಕಾದ ಅನುದಾನ ಭರಿಸಿಕೊಳ್ಳಬೇಕು.

ಮೇಲಿನಂತೆ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆ(ಕಾಲೇಜು ಶಿಕ್ಷಣ) ನಿಯಮಗಳು 2003ರಂತೆ ಕೂಲಂಕಷವಾಗಿ ಪರಿಶೀಲಿಸಿ, ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31/12/2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ, ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಂಡು, ಕಾಲೇಜುವಾರು ಪ್ರತ್ಯೇಕ ಪ್ರಸ್ತಾವನೆಯನ್ನು ನಿಗದಿತ ಚೆಕ್-ಲಿಸ್ಟ್‌ನೊಂದಿಗೆ ಎಲ್ಲಾ ಅಂಕಪಟ್ಟಿಗಳನ್ನು ಹಾಗೂ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಂದ/ವಿಶ್ವವಿದ್ಯಾಲಯಗಳಿಂದ ನೈಜತೆಯ ಬಗ್ಗೆ ಪರಿಶೀಲಿಸಿ ದೃಢೀಕರಿಸಿಕೊಂಡು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರ ಮೇಲು ರುಜುವಿನೊಂದಿಗೆ ಇಲಾಖೆಯ ಸ್ಪಷ್ಟ ಅಭಿಪ್ರಾಯ ಹಾಗೂ ಶಿಫಾರಸ್ಸಿನೊಂದಿಗೆ ಸರ್ಕಾರದ ಅನುಮೋದನೆಗಾಗಿ ಜರೂರಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಈ ಮೂಲಕ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ಈ ಪತ್ರವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ :ಆಇ 290 ವೆಚ್ಚ-8/2017 ದಿನಾಂಕ 28.07.2017 ರ ಸಹಮತಿಯ ಮೇರೆಗೆ ಹೊರಡಿಸಲಾಗಿದೆ

ತಮ್ಮ ನಂಬುಗೆಯ,

(ಕೆ.ಶಿವಲಿಂಗಯ್ಯ) 1/9

ಸರ್ಕಾರದ ಅಧೀನ ಕಾರ್ಯದರ್ಶಿ,

ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).